**Akashvani : Bangalore**
**National Bulletin In Kannada**
**20.04.2025 / 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**20.04.2025 / 7.35 am**

**<><*<><>*><>**

ಮುಖ್ಯಾಂಶಗಳು

೧. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಇಂದಿನಿಂದ ಅಮೆರಿಕ - ಪೆರುವಿಗೆ ಅಧಿಕೃತ ಭೇಟಿ; ಹಲವು ಮಹತ್ವದ ಸಭೆಗಳಲ್ಲಿ ಭಾಗಿ

೨. ವಿಶ್ವಾದಾದ್ಯಂತ ಇಂದು ಈಸ್ಟರ್ ಹಬ್ಬ ಆಚರಣೆ; ರಾಷ್ಟ್ರಪತಿ, ಉಪರಾಷ್ಟ್ರಪತಿ ಸೇರಿದಂತೆ ಗಣ್ಯರಿಂದ ಶುಭಾಶಯ

೩. ಸ್ಕ್ವಾಷ್ ವಿಶ್ವ ಚಾಂಪಿಯನ್‌ಶಿಪ್ ಅರ್ಹತಾ ಸುತ್ತು; ಪ್ರತ್ಯೇಕ ವಿಭಾಗಗಳಲ್ಲಿಂದು ಭಾರತದ ವೀರ್ ಚೋತ್ರಾಣಿ, ಅನಹತ್ ಸಿಂಗ್ ಫೈನಲ್‌ನಲ್ಲಿ ಕಣಕ್ಕೆ

೪. ಐಪಿಎಲ್ ಟಿ-೨೦ ಕ್ರಿಕೆಟ್; ರಾಜಸ್ಥಾನ ರಾಯಲ್ಸ್ ವಿರುದ್ಧ ಲಕ್ನೋ ಸೂಪರ್ ಜೈಂಟ್ಸ್‌ಗೆ ೨ ರನ್‌ಗಳ ಜಯ

**<><*<><>*><>**

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಇಂದಿನಿಂದ ಅಮೆರಿಕ ಮತ್ತು ಪೆರುವಿಗೆ ಅಧಿಕೃತ ಭೇಟಿ ನೀಡಲಿದ್ದಾರೆ. ಸ್ಯಾನ್ ಫ್ರಾನ್ಸಿಸ್ಕೋದಲ್ಲಿ, ಹಣಕಾಸು ಸಚಿವೆ ಸೀತಾರಾಮನ್ ಸ್ಟ್ಯಾನ್‌ಫೋರ್ಡ್ ವಿಶ್ವವಿದ್ಯಾಲಯದ ಹೂವರ್ ಸಂಸ್ಥೆಯಲ್ಲಿ 'ವಿಕಸಿತ ಭಾರತ ೨೦೪೭' ಕ್ಕೆ ಅಡಿಪಾಯ' ಎಂಬ ಶೀರ್ಷಿಕೆಯಡಿ ಭಾಷಣ ಮಾಡಲಿದ್ದಾರೆ. ಹಣಕಾಸು ಸಚಿವರು, ಹೂಡಿಕೆದಾರರೊಂದಿಗೆ ದುಂಡುಮೇಜಿನ ಸಭೆಯ ಸಮಯದಲ್ಲಿ ಪ್ರಮುಖ ನಿಧಿ ನಿರ್ವಹಣಾ ಸಂಸ್ಥೆಗಳ ಉನ್ನತ ಅಧಿಕಾರಿಗಳೊಂದಿಗೆ ಸಂವಹನ ನಡೆಸಲಿದ್ದಾರೆ. ವಾಷಿಂಗ್ಟನ್ ಡಿಸಿಯಲ್ಲಿ, ಸಚಿವರು, ಅಂತರರಾಷ್ಟ್ರೀಯ ಹಣಕಾಸು ನಿಧಿ -ಐಎಂಎಫ್, ವಿಶ್ವಬ್ಯಾಂಕ್‌ನ ವಸಂತ ಸಭೆಗಳು, ೨ ನೇ ಜಿ-೨೦ ಹಣಕಾಸು ಸಚಿವರ ಮತ್ತು ಕೇಂದ್ರ ಬ್ಯಾಂಕ್ ಗವರ್ನರ್‌ಗಳ ಸಭೆಗಳು, ಅಭಿವೃದ್ಧಿ ಸಮಿತಿ ಸಭೆ, ಮತ್ತು ಜಾಗತಿಕ ಸಾರ್ವಭೌಮ ಸಾಲ ದುಂಡುಮೇಜಿನ ಸಭೆಯಲ್ಲಿ ಭಾಗವಹಿಸಲಿದ್ದಾರೆ. ಇದೇ ೨೬ ರಿಂದ ೩೦ ರವರೆಗೆ ಪೆರುವಿಗೆ ತಮ್ಮ ಮೊದಲ ಭೇಟಿಯ

ಸಂದರ್ಭದಲ್ಲಿ, ಸಚಿವೆ ನಿರ್ಮಲಾ ಸೀತಾರಾಮನ್, ಹಣಕಾಸು ಸಚಿವಾಲಯದ ಅಧಿಕಾರಿಗಳು ಮತ್ತು ವ್ಯಾಪಾರ ನಾಯಕರ ಭಾರತೀಯ ನಿಯೋಗದ ನೇತೃತ್ವ ವಹಿಸಲಿದ್ದಾರೆ. ಉಭಯ ರಾಷ್ಟ್ರಗಳ ನಡುವಿನ ದ್ವಿಪಕ್ಷೀಯ ಆರ್ಥಿಕ ಮತ್ತು ವ್ಯಾಪಾರ ಸಂಬಂಧಗಳನ್ನು ಬಲಪಡಿಸುವುದರ ಕುರಿತು ಚರ್ಚೆ ನಡೆಸಲಿದ್ದಾರೆ.

<><*<><>*><>

ವಿಶ್ವಾದ್ಯಂತ ಇಂದು ಈಸ್ಟರ್ ಹಬ್ಬವನ್ನು ಆಚರಿಸಲಾಗುತ್ತಿದೆ. ಶುಭ ಶುಕ್ರವಾರದಂದು ಶಿಲುಬೆಗೇರಿಸಿದ ನಂತರ ಮರಣಹೊಂದಿದ ಏಸು ಕ್ರಿಸ್ತರ ಪುನರುತ್ಥಾನದ ದಿನ ಇದಾಗಿದೆ. ದೇಶಾದ್ಯಂತ ಕ್ರಿಶ್ಚಿಯನ್ ಬಾಂಧವರು ಈ ಹಬ್ಬವನ್ನು ವಿಶೇಷವಾಗಿ ಆಚರಿಸುತ್ತಿದ್ದು, ಚರ್ಚ್‌ಗಳಲ್ಲಿ ಸಾಮೂಹಿಕ ಪ್ರಾರ್ಥನೆ ಕೈಗೊಳ್ಳಲಾಗುತ್ತಿದೆ. ಈಸ್ಟರ್ ಹಬ್ಬದ ಅಂಗವಾಗಿ ದೇಶದ ಜನತೆಗೆ ಹಾಗೂ ವಿಶೇಷವಾಗಿ ಭಾರತ ಮತ್ತು ವಿದೇಶಗಳಲ್ಲಿ ವಾಸಿಸುವ ಕ್ರಿಶ್ಚಿಯನ್ ಸಮುದಾಯಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಶುಭಾಶಯ ಕೋರಿದ್ದಾರೆ. ಭಗವಾನ್ ಯೇಸು ಕ್ರಿಸ್ತನ ಪುನರುತ್ಥಾನವನ್ನು ಸ್ಮರಿಸುವ ಪವಿತ್ರ ಈಸ್ಟರ್ ಹಬ್ಬ, ನಿಸ್ವಾರ್ಥ ಪ್ರೀತಿ ಮತ್ತು ಸೇವೆಯ ಸಂದೇಶವನ್ನು ನೀಡುತ್ತದೆ ಎಂದು ರಾಷ್ಟ್ರಪತಿಯವರು ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ. ಯೇಸು ಕ್ರಿಸ್ತನ ಜೀವನವು, ತ್ಯಾಗ ಮತ್ತು ಕ್ಷಮೆಯ ಮೌಲ್ಯವನ್ನು ಕಲಿಸುತ್ತದೆ. ಸತ್ಯ, ನ್ಯಾಯ, ಮಾನವೀಯತೆ ಮತ್ತು ಕರುಣೆಯ ಮಾರ್ಗವನ್ನು ಅನುಸರಿಸಲು ಪ್ರೇರೇಪಿಸುತ್ತದೆ. ಯೇಸು ಕ್ರಿಸ್ತನ ಜೀವನ ಮೌಲ್ಯಗಳನ್ನು ಅಳವಡಿಸಿಕೊಳ್ಳಲು ಮತ್ತು ಸಮಾಜದಲ್ಲಿ ಶಾಂತಿ, ಸಮೃದ್ಧಿಯನ್ನು ಉತ್ತೇಜಿಸುವಂತೆ ರಾಷ್ಟ್ರಪತಿ ದ್ರೌಪದಿ ಮುರ್ಮು ಕರೆ ನೀಡಿದ್ದಾರೆ. ತಮ್ಮ ಸಂದೇಶದಲ್ಲಿ ಉಪರಾಷ್ಟ್ರಪತಿಗಳು, ಏಸು ಕ್ರಿಸ್ತರ ಪುನರುತ್ಥಾನ ಸೂಚಿಸುವ ಈಸ್ಟರ್ ಹಬ್ಬ, ಭರವಸೆ ಮತ್ತು ಹೊಸತನದ ಸಂಕೇತವಾಗಿದೆ. ಸಹಾನುಭೂತಿ, ದಯೆ ಮತ್ತು ಸೇವಾ ಮನೋಭಾವದ ಏಸು ಕ್ರಿಸ್ತರ ಕಾಲಾತೀತ ಬೋಧನೆಗಳು ಉತ್ತಮ ಸಮಾಜ ನಿರ್ಮಾಣದೆಡೆಗೆ ನಾಗರಿಕರಿಗೆ ಮಾರ್ಗದರ್ಶನ ನೀಡುತ್ತವೆ ಎಂದಿದ್ದಾರೆ.

<><*<><>*><>

ಸೌದಿ ಅರೇಬಿಯಾ ಪ್ರಧಾನಿ, ರಾಜಕುಮಾರ ಮೊಹಮ್ಮದ್ ಬಿನ್ ಸಲ್ಮಾನ್ ಅವರ ಆಹ್ವಾನದ ಮೇರೆಗೆ ಪ್ರಧಾನಿ ನರೇಂದ್ರ ಮೋದಿ ಇದೇ ೨೨ ರಂದು ಸೌದಿ ಅರೇಬಿಯಾಕ್ಕೆ ಎರಡು ದಿನಗಳ ಪ್ರವಾಸ ಕೈಗೊಳ್ಳಲಿದ್ದಾರೆ. ಈ ಮೊದಲು ಪ್ರಧಾನಿ ನರೇಂದ್ರ ಮೋದಿ, ೨೦೧೬ ಮತ್ತು ೨೦೧೯ ರಲ್ಲಿ ಸೌದಿ ಅರೇಬಿಯಾಕ್ಕೆ ಭೇಟಿ ನೀಡಿದ್ದರು. ಸೌದಿ ಅರೇಬಿಯಾಕ್ಕೆ ಪ್ರಧಾನಿಯವರು ನೀಡುತ್ತಿರುವ

ಮೂರನೇ ಭೇಟಿ ಇದಾಗಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಸೆಪ್ಟೆಂಬರ್ ೨೦೨೩ ರಲ್ಲಿ ರಾಜಕುಮಾರ ಸಲ್ಮಾನ್, ಜಿ-೨೦ ಶೃಂಗಸಭೆಯಲ್ಲಿ ಭಾಗವಹಿಸಲು ಮತ್ತು ಭಾರತ-ಸೌದಿ ಅರೇಬಿಯಾ ಕಾರ್ಯತಂತ್ರದ ಪಾಲುದಾರಿಕೆ ಮಂಡಳಿಯ ಮೊದಲ ಸಭೆಯ ಸಹ-ಅಧ್ಯಕ್ಷತೆ ವಹಿಸಲು ನವದೆಹಲಿಗೆ ಆಗಮಿಸಿದ್ದರು. ಭಾರತ ಮತ್ತು ಸೌದಿ ಅರೇಬಿಯಾ ಸಾಮಾಜಿಕ-ಸಾಂಸ್ಕೃತಿಕ ಮತ್ತು ವ್ಯಾಪಾರ ಸಂಪರ್ಕಗಳ ದೀರ್ಘ ಇತಿಹಾಸದೊಂದಿಗೆ ನಿಕಟ ಮತ್ತು ಸ್ನೇಹಪರ ಸಂಬಂಧಗಳನ್ನು ಹಂಚಿಕೊಳ್ಳುತ್ತವೆ. ಕಾರ್ಯತಂತ್ರದ ಪಾಲುದಾರರಾಗಿ, ಎರಡೂ ದೇಶಗಳು ರಾಜಕೀಯ, ರಕ್ಷಣೆ, ಭದ್ರತೆ, ವ್ಯಾಪಾರ, ಹೂಡಿಕೆ, ಇಂಧನ, ತಂತ್ರಜ್ಞಾನ, ಆರೋಗ್ಯ, ಶಿಕ್ಷಣ, ಸಂಸ್ಕೃತಿ ಮತ್ತು ಜನರಿಂದ ಜನರಿಗೆ ಸಂಬಂಧಗಳು ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಬಲವಾದ ದ್ವಿಪಕ್ಷೀಯ ಸಂಬಂಧಗಳನ್ನು ಹಂಚಿಕೊಳ್ಳುತ್ತವೆ. ಪ್ರಧಾನಿ ನರೇಂದ್ರ ಮೋದಿಯವರ ಭೇಟಿಯು ಸೌದಿ ಅರೇಬಿಯಾದೊಂದಿಗಿನ ದ್ವಿಪಕ್ಷೀಯ ಸಂಬಂಧಕ್ಕೆ ಭಾರತ ನೀಡುವ ಪ್ರಾಮುಖ್ಯತೆಯನ್ನು ಪ್ರತಿಬಿಂಬಿಸುತ್ತದೆ. ಇದು ನಮ್ಮ ಬಹುಮುಖಿ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸಲು ಹಾಗೂ ಪರಸ್ಪರ ಹಿತಾಸಕ್ತಿಯ ವಿವಿಧ ಪ್ರಾದೇಶಿಕ ಮತ್ತು ಅಂತರರಾಷ್ಟ್ರೀಯ ವಿಷಯಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲು ಅವಕಾಶವನ್ನು ಒದಗಿಸುತ್ತದೆ.

<><*<><>*><>

ಮೇ ೧ ರಿಂದ ೪ ರವರೆಗೆ ಮುಂಬೈನಲ್ಲಿ ನಡೆಯಲಿರುವ ವಿಶ್ವ, ಶ್ರವಣ, ದೃಶ್ಯ ಮತ್ತು ಮನರಂಜನಾ ಶೃಂಗಸಭೆ ವೇವ್ಸ್-೨೦೨೫ ಕ್ಕೆ ಪೂರ್ವಭಾವಿಯಾಗಿ ನಿನ್ನೆ ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ವಿವಿಧ ಸುದ್ದಿಸಂಸ್ಥೆಗಳೊಂದಿಗೆ ಸಂವಾದ ನಡೆಸಿದರು. ಸಂವಾದದಲ್ಲಿ ೨೦ ರಾಷ್ಟ್ರೀಯ ಹಾಗೂ ಪ್ರಾದೇಶಿಕ ಸುದ್ದಿಸಂಸ್ಥೆಗಳು ಪಾಲ್ಗೊಂಡಿದ್ದವು. ಈ ವೇಳೆ ಮಾತನಾಡಿದ ಸಚಿವರು, ರಚನಾಕಾರರು ಮತ್ತು ಅವರ ಆರ್ಥಿಕತೆ ಗಮನಾರ್ಹ ಬದಲಾವಣೆಗಳನ್ನು ಕಾಣುತ್ತಿದೆ. ಇದು ತಂತ್ರಜ್ಞಾನದ ಯುಗವಾಗಿದ್ದು, ಹಳೆಯ ತಂತ್ರಜ್ಞಾನದ ಮಾದರಿ, ಹೊಸ ತಂತ್ರಜ್ಞಾನಕ್ಕೆ ದಾರಿ ಮಾಡಿಕೊಡುತ್ತಿದೆ. ಆ ಮೂಲಕ ನೂತನ ಅವಕಾಶಗಳ ಜೊತೆಗೆ ಸವಾಲುಗಳನ್ನು ಸೃಷ್ಟಿಸುತ್ತಿದೆ. ಭಾರತದ ಸೃಜನಶೀಲ ಆರ್ಥಿಕತೆಗೆ ವೇಗ ದೊರಕಿದ್ದು, ವೇವ್ಸ್-೨೦೨೫ ಕ್ಕೆ ಒಂದು ಲಕ್ಷಕ್ಕೂ ಅಧಿಕ ನೊಂದಣಿಗಳನ್ನು ಸ್ವೀಕರಿಸಲಾಗಿದೆ ಎಂದರು.

<><*<><>*><>

ನ್ಯಾಯಾಂಗ ವ್ಯವಸ್ಥೆಯಲ್ಲಿ ಕೃತಕ ಬುದ್ಧಿಮತ್ತೆಯ ಪಾತ್ರ ಹೆಚ್ಚುತ್ತಿರುವ ಹೊರತಾಗಿಯೂ, ಮಾನವ ಹಸ್ತಕ್ಷೇಪ ಅತ್ಯಗತ್ಯವಾಗಿದೆ ಎಂದು ಕೇಂದ್ರ ಕಾನೂನು ಮತ್ತು ನ್ಯಾಯ ಖಾತೆ ರಾಜ್ಯ ಸಚಿವ

ಅರ್ಜುನ್ ಮೇಘವಾಲ್ ಹೇಳಿದ್ದಾರೆ. ಪುಣೆಯಲ್ಲಿ ನಿನ್ನೆ ನಡೆದ ಕಾನೂನಿನಲ್ಲಿ ಕೃತಕ ಬುದ್ಧಿಮತ್ತೆಯ ಕುರಿತಾದ ಕಾನೂನು ಸಮಾವೇಶದಲ್ಲಿ ಮಾತನಾಡಿದ ಸಚಿವರು, ಇ-ಕೋರ್ಟ್ಸ್ ಯೋಜನೆಯಡಿಯಲ್ಲಿ ವರ್ಚುವಲ್ ಹೈಕೋರ್ಟ್ ಪೀಠದ ಪ್ರಸ್ತಾಪವನ್ನು ಘೋಷಿಸಿದರು ಮತ್ತು ನೋಟರಿ-ಸಂಬಂಧಿತ ಸಮಸ್ಯೆಗಳನ್ನು ೧೫ ದಿನಗಳಲ್ಲಿ ಪರಿಹರಿಸಲಾಗುವುದು ಎಂದು ಭರವಸೆ ನೀಡಿದರು. ವಕೀಲರಿಗೆ ವೈದ್ಯಕೀಯ ವಿಮಾ ಯೋಜನೆಯ ಪ್ರಗತಿಯನ್ನು ಅವರು ಪ್ರಸ್ತಾಪಿಸಿದರು ಮತ್ತು ವಕೀಲರ ರಕ್ಷಣಾ ಕಾಯ್ದೆಯ ಬಗ್ಗೆ ಆಶಾವಾದ ವ್ಯಕ್ತಪಡಿಸಿದ್ದಾರೆ.

ಧ್ವನಿ: ಅರ್ಜುನ್ ಮೇಘವಾಲ್ , ಕೇಂದ್ರ ಸಚಿವ

**<><*<><>*><>**

ಭಾರತದ ಐದು ಟ್ರಿಲಿಯನ್ ಡಾಲರ್ ಆರ್ಥಿಕತೆಯ ದೃಷ್ಟಿಕೋನವು ಕೇವಲ ಜಿಡಿಪಿ ಅಂಕಿ ಅಂಶವಲ್ಲ - ಇದು ಲಕ್ಷಾಂತರ ಜನರನ್ನು ಬಡತನದಿಂದ ಮೇಲೆತ್ತುವುದು, ವಿಶ್ವ ದರ್ಜೆಯ ಮೂಲಸೌಕರ್ಯ, ಇಂಧನ ಭದ್ರತೆ ಮತ್ತು ಡಿಜಿಟಲ್ ಸಬಲೀಕರಣಗೊಳಿಸುವುದನ್ನು ಒಳಗೊಂಡಿದೆ ಎಂದು ಪ್ರಧಾನ ಮಂತ್ರಿಗಳ ಪ್ರಧಾನ ಕಾರ್ಯದರ್ಶಿ ಡಾ.ಪಿ.ಕೆ.ಮಿಶ್ರಾ ತಿಳಿಸಿದ್ದಾರೆ. ಸಂಬಲ್ಪುರದಲ್ಲಿ ನಿನ್ನೆ ನಡೆದ ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಮ್ಯಾನೇಜ್ಮೆಂಟ್‌ನ ೯ನೇ ವಾರ್ಷಿಕ ಘಟಿಕೋತ್ಸವದಲ್ಲಿ ಪದವಿ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಅವರು ಮಾತನಾಡಿದರು.

**<><*<><>*><>**

ಮಲೇಷ್ಯಾದ ಕೌಲಾಲಂಪುರದಲ್ಲಿ ಇಂದು ನಡೆಯಲಿರುವ ವಿಶ್ವ ಸ್ಕ್ವಾಷ್ ಚಾಂಪಿಯನ್‌ಶಿಪ್ ನ ಏಷ್ಯಾ ಅರ್ಹತಾ ಸ್ಪರ್ಧೆಯ ಫೈನಲ್‌ನಲ್ಲಿ ಭಾರತದ ವೀರ್ ಚೋತ್ರಾನಿ ಮತ್ತು ಅನಾಹತ್ ಸಿಂಗ್ ಕಣಕ್ಕಿಳಿಯುತ್ತಿದ್ದಾರೆ. ನಿನ್ನೆ ನಡೆದ ಪುರುಷರ ವಿಭಾಗದ ಸೆಮಿಫೈನಲ್‌ನಲ್ಲಿ ಹಾಂಗ್ ಕಾಂಗ್‌ನ ಚಿ ಹಿಮ್ ವಾಂಗ್ ಅವರನ್ನು ೩-೧ ಅಂತರದಿಂದ ಸೋಲಿಸಿದ ನಂತರ ಎರಡನೇ ಶ್ರೇಯಾಂಕದ ಚೋತ್ರಾನಿ ಇಂದು ಫೈನಲ್‌ನಲ್ಲಿ ಮಲೇಷ್ಯಾದ ಮೂರನೇ ಶ್ರೇಯಾಂಕದ ಅಮೀಶ್‌ನ್ರಾಜ್ ಚಂದ್ರನ್ ಅವರನ್ನು ಎದುರಿಸಲಿದ್ದಾರೆ. ಮಹಿಳಾ ವಿಭಾಗದಲ್ಲಿ, ಐದನೇ ಶ್ರೇಯಾಂಕದ ಅನಾಹತ್ ಸಿಂಗ್, ಎಂಟನೇ ಶ್ರೇಯಾಂಕದ ಹಾಂಗ್ ಕಾಂಗ್‌ನ ಹೆಲೆನ್ ಟ್ಯಾಂಗ್ ವಿರುದ್ಧ ೩-೦ ಅಂತರದ ಭರ್ಜರಿ ಜಯ ಸಾಧಿಸಿ ಫೈನಲ್ ಪ್ರವೇಶಿಸಿದ್ದಾರೆ. ಅವರು ಇಂದು ನಡೆಯುವ ಫೈನಲ್ ಪಂದ್ಯದಲ್ಲಿ ಹಾಂಗ್ ಕಾಂಗ್‌ನ ಟೋಬಿ ತ್ಸೆ ಅವರನ್ನು ಎದುರಿಸಲಿದ್ದಾರೆ.

ಎರಡೂ ವಿಭಾಗಗಳ ವಿಜೇತರು ಮೇ ೯ ರಿಂದ ೧೭ ರವರೆಗೆ ಚಿಕಾಗೋದಲ್ಲಿ ನಡೆಯಲಿರುವ ವಿಶ್ವ ಚಾಂಪಿಯನ್‌ಶಿಪ್‌ಗೆ ಅರ್ಹತೆ ಪಡೆಯಲಿದ್ದಾರೆ.

<><*<><>*><>

ಜೈಪುರದ ಸವಾಯ್ ಮಾನ್ಸಿಂಗ್ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್‌ನಲ್ಲಿ ಲಕ್ನೋ ಸೂಪರ್ ಜೈಂಟ್ಸ್ ತಂಡ, ರಾಜಸ್ಥಾನ ರಾಯಲ್ಸ್ ತಂಡವನ್ನು ೨ ರನ್‌ಗಳಿಂದ ಪರಾಭಗೊಳಿಸಿತು. ಇಂದು ಎರಡು ಪಂದ್ಯಗಳು ನಡೆಯಲಿದ್ದು, ಚಂಡೀಗಢದಲ್ಲಿ ನಡೆಯಲಿರುವ ಮೊದಲ ಪಂದ್ಯದಲ್ಲಿ, ಪಂಜಾಬ್ ಕಿಂಗ್ಸ್ ತಂಡ, ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವನ್ನು ಎದುರಿಸಲಿದೆ. ಪಂದ್ಯ ಮಧ್ಯಾಹ್ನ ೩:೩೦ ಕ್ಕೆ ಆರಂಭವಾಗಲಿದೆ. ಮುಂಬೈನಲ್ಲಿ ನಡೆಯಲಿರುವ ದಿನದ ಎರಡನೇ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್, ಚೆನ್ನೈ ಸೂಪರ್ ಕಿಂಗ್ಸ್ ತಂಡವನ್ನು ಎದುರಿಸಲಿದೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>